ಕರ್ನಾಟಕ ಸರ್ಕಾರ

**ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು-1**

ಸಂಖ್ಯೆ: ಸಿ4(6)ರಜೆ ಆದೇಶ01/2017-18 ದಿನಾಂಕ:22/03/2018

**-ಜ್ಞಾಪನಾ-**

**ವಿಷಯ:** 2018-19 ನೇ ಸಾಲಿನ ಶೈಕ್ಷಣಿಕ ವರ್ಷದಲ್ಲಿ ರಾಜ್ಯದ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಿಗೆ ಶೈಕ್ಷಣಿಕ ಅವಧಿಗಳು ಮತ್ತು ರಜಾ ಅವಧಿಗಳನ್ನು ನಿಗಧಿಪಡಿಸುವ ಬಗ್ಗೆ.

----*****---

ರಾಜ್ಯದಲ್ಲಿನ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಿಗೆ 2018-19ನೇ ಶೈಕ್ಷಣಿಕ ವರ್ಷದ ಶೈಕ್ಷಣಿಕ ಅವಧಿ, ಮಧ್ಯಂತರ ರಜೆ ಹಾಗೂ ಬೇಸಿಗೆ ರಜೆಗಳನ್ನು ಈ ಕೆಳಗಿನ ನಿಬಂಧನೆಗೊಳಪಟ್ಟು ನಿಗಧಿಪಡಿಸಿ ಆದೇಶಿಸಿದೆ.

| ಶಾಲಾ ದಿನಗಳ ವಿವರ | |
|---|---|
| ದಿನಾಂಕ: 28.05.2018 ರಿಂದ 06.10.2018ರವರೆಗೆ | ಮೊದಲನೇ ಶೈಕ್ಷಣಿಕ ಅವಧಿ |
| ದಿನಾಂಕ: 22.10.2018 ರಿಂದ 10.04.2019ರವರೆಗೆ | ಎರಡನೇ ಶೈಕ್ಷಣಿಕ ಅವಧಿ |
| **ರಜಾ ಅವಧಿಗಳು** | |
| ದಿನಾಂಕ: 07.10.2018 ರಿಂದ 21.10.2018ರವರೆಗೆ | ಮಧ್ಯಂತರ ರಜೆ |
| ದಿನಾಂಕ: 11.04.2019 ರಿಂದ 26.05.2019ರವರೆಗೆ | ಬೇಸಿಗೆ ರಜೆ |

1. ದಿನಾಂಕ: 11.04.2019ರಿಂದ ಬೇಸಿಗೆ ರಜೆಯನ್ನು ನೀಡಿದ್ದರೂ ಸಹ ದಿನಾಂಕ: 14.04.2019ರಂದು ಬರುವ ಡಾ//ಬಿ.ಆರ್.ಅಂಬೇಡ್ಕರ್ ಜಯಂತಿಯನ್ನು ಶಾಲಾ ಮುಖ್ಯ ಶಿಕ್ಷಕರು ಹಾಗೂ ಎಸ್‌ಡಿಎಂಸಿ ಸದಸ್ಯರು ಸೇರಿ ವಿದ್ಯಾರ್ಥಿಗಳೊಂದಿಗೆ ಕಡ್ಡಾಯವಾಗಿ ಆಚರಿಸಬೇಕು.

2. ಕ್ರಿಸ್‌ಮಸ್ ರಜೆ ಬೇಡಿಕೆಯನ್ನು ಸಂಬಂಧಿಸಿದ ಸಂಸ್ಥೆಗಳು ಆಯಾ ವ್ಯಾಪ್ತಿಯ ಉಪನಿರ್ದೇಶಕರುಗಳಿಗೆ ಸಲ್ಲಿಸಿದ್ದಲ್ಲಿ, ಈ ಬಗ್ಗೆ ಆಯಾ ಉಪನಿರ್ದೇಶಕರುಗಳು ಪರಿಶೀಲಿಸಿ, ಡಿಸೆಂಬರ್ ಮಾಹೆಯಲ್ಲಿ ನೀಡುವ ಕ್ರಿಸ್‌ಮಸ್ ರಜಾ ಅವಧಿಯನ್ನು ಅಕ್ಟೋಬರ್ ಮಾಹೆಯ ಮಧ್ಯಂತರ ರಜೆಯಲ್ಲಿ ಕಡಿತಗೊಳಿಸಿ ಸರಿದೂಗಿಸಕೊಳ್ಳತಕ್ಕದ್ದು.

3. ಕನ್ನಡ ರಾಜ್ಯೋತ್ಸವ ಆಚರಿಸುವ ಬೆಂಗಳೂರು ಉತ್ತರ ಹಾಗೂ ದಕ್ಷಿಣ ಜಿಲ್ಲೆಗಳ ಉಪನಿರ್ದೇಶಕರುಗಳು ತಮ್ಮ ವ್ಯಾಪ್ತಿಯ ಶಾಲೆಗಳಿಗೆ ಮಧ್ಯಂತರ ರಜಾ ಅವಧಿಯನ್ನು ಅವಶ್ಯಕತೆಗನುಗುಣವಾಗಿ ಮಾರ್ಪಡಿಸಿಕೊಳ್ಳುವ ಬಗ್ಗೆ ಸಂಬಂಧಿಸಿದ ಉಪನಿರ್ದೇಶಕರು ಶೈಕ್ಷಣಿಕ ಕರ್ತವ್ಯದ ಅವಧಿಗಳ ಕೊರತೆ ಬಾರದ ರೀತ್ಯಾ ಕ್ರಮ ಮಾಡತಕ್ಕದ್ದು.

4. ನಿಗಧಿಪಡಿಸಿದ ಶೈಕ್ಷಣಿಕ ಶಾಲಾ ಕರ್ತವ್ಯದ ಅವಧಿಗಳು ಕಡಿಮೆಯಾಗದಂತೆ, ಮುಷ್ಕರ ಇನ್ನಿತರೆ ಕಾರಣಗಳಿಂದ ರಜೆ ಘೋಷಿಸಿದ್ದಲ್ಲಿ ಆ ಅವಧಿಯ ಶಾಲಾ ಕರ್ತವ್ಯದ ದಿನಗಳನ್ನು ಮುಂದಿನ ರಜಾ ದಿನಗಳಲ್ಲಿ ಪೂರ್ಣ ದಿನ ಶಾಲೆಗಳನ್ನು ನಡೆಸಿ ಶಾಲಾ ಕರ್ತವ್ಯದ ದಿನಗಳನ್ನು ಸರಿದೂಗಿಸಿಕೊಳ್ಳಲು ಉಪನಿರ್ದೇಶಕರು ಕ್ರಮ ವಹಿಸುವುದು.

(ಡಾ|| ಪಿ.ಸಿ ಜಾಫರ್)
ಆಯುಕ್ತರು
ಸಾರ್ವಜನಿಕ ಶಿಕ್ಷಣ ಇಲಾಖೆ,

ಇವರಿಗೆ:-

1. ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ/ಅಭಿವೃದ್ಧಿ), ಸಾರ್ವಜನಿಕ ಶಿಕ್ಷಣ ಇಲಾಖೆ, ಇವರಿಗೆ ಮುಂದಿನ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ ಇವರಿಗೆ ಮುಂದಿನ ಕ್ರಮಕ್ಕಾಗಿ.

ಪ್ರತಿಗಳು:-

1. ಮಾನ್ಯ ಘನತೆವೆತ್ತ ರಾಜ್ಯಪಾಲರ ಆಪ್ತ ಕಾರ್ಯದರ್ಶಿಗಳು, ರವರಿಗೆ.
2. ಮಾನ್ಯ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ, ಕೊಠಡಿ ಸಂಖ್ಯೆ: 262/262ಎ, ವಿಧಾನಸೌಧ, 2ನೇ ಮಹಡಿ, ಬೆಂಗಳೂರು-01. ರವರಿಗೆ.
3. ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ, ಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು – 560 001 ರವರಿಗೆ.
4. ರಾಜ್ಯ ಯೋಜನಾ ನಿರ್ದೇಶಕರು, ಸರ್ವ ಶಿಕ್ಷಣ ಅಭಿಯಾನ, ನೃಪತುಂಗ ರಸ್ತೆ, ಬೆಂಗಳೂರು ರವರಿಗೆ.
5. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಗುಲ್ಬರ್ಗಾ/ಧಾರವಾಡ ಸೂಕ್ತ ಕ್ರಮಕ್ಕಾಗಿ.
6. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ನಿರ್ದೇಶಕರುಗಳಿಗೆ.
7. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಿಗೆ.
8. ಸಹನಿರ್ದೇಶಕರು, ಮಧ್ಯಾಹ್ನ ಉಪಹಾರ ಯೋಜನೆ, ಬೆಂಗಳೂರು.
9. ಅಧ್ಯಕ್ಷರು, ಕರ್ನಾಟಕ ರಾಜ್ಯ ಪ್ರಾಂಶುಪಾಲರ ಮತ್ತು ಪ್ರೌಢಶಾಲಾ ಮುಖ್ಯ ಶಿಕ್ಷಕರ ಸಂಘ, ಬೆಂಗಳೂರು.
10. ಅಧ್ಯಕ್ಷರು, ಕರ್ನಾಟಕ ರಾಜ್ಯ ಪ್ರೌಢಶಾಲಾ ಸಹ ಶಿಕ್ಷಕರ ಸಂಘ, ಬೆಂಗಳೂರು
11. ಅಧ್ಯಕ್ಷರು, ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ, ಬೆಂಗಳೂರು.
12. ಸಾರ್ವಜನಿಕ ಸಂಪರ್ಕಾಧಿಕಾರಿಗಳು, ಆಯುಕ್ತರ ಕಛೇರಿ, ಸಾ.ಶಿ.ಇಲಾಖೆ, ಬೆಂಗಳೂರು.
13. ಕಛೇರಿ ಪ್ರತಿ.